ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಅನುದಾನ ನೀಡುವ ಬಗ್ಗೆ

ಶ್ರೀ ವಿಜಯಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

ಶ್ರೀ ಅಲ್ಲಂ ವೀರಭದ್ರಪ್ಪ(ವಿಧಾನಸಭೆಯಿಂದ ಚುನಾಯಿತರಾದವರು) -

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) -

ಶ್ರೀ ಆರ್. ಬಿ. ತಿಮ್ಮಾಪೂರ(ವಿಧಾನಸಭೆಯಿಂದ ಚುನಾಯಿತರಾದವರು) -

56 (531+616+599+495+496) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2018-19 ಮತ್ತು 2019-20ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು; ಸದರಿ ಅನುದಾನವು ಸಮರ್ಪಕವಾಗಿ ಬಳಕೆ ಆಗಿದೆಯೇ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) 2018-19ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯಡಿ ಕಾಮಗಾರಿ ಕೈಗೊಳ್ಳಲು ಅನುದಾನ ಕೋರಿ ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿವೆ;

(ಇ) ಸದರಿ ಪ್ರಸ್ತಾವನೆಗಳಿಗೆ ಅನುದಾನ ಬಿಡುಗಡೆ ಮಾಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಅನುದಾನವನ್ನು ಬಿಡುಗಡೆ ಮಾಡಲಾಗಿದೆ;

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಮಂಜೂರಾಗಿರುವ ಹಾಗೂ ಬಿಡುಗಡೆ ಆಗಿರುವ ಅನುದಾನ ಎಷ್ಟು; (ವರ್ಷವಾರು ವಿವರ ನೀಡುವುದು)

(ಉ) ಈ ಅವಧಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿದೆ ಹಾಗೂ ಉಳಿದ ಕಾಮಗಾರಿಗಳು ಯಾವ ಹಂತದಲ್ಲಿದೆ; (ವರ್ಷವಾರು ವಿವರ ನೀಡುವುದು)

(ಊ) ಕಲ್ಯಾಣ ಕರ್ನಾಟಕ ಅಭಿವೃದ್ಧಿ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು; (ವೃಂದವಾರು ಮಾಹಿತಿ ನೀಡುವುದು) ಈ ಪೈಕಿ ನಿಯೋಜನೆ ಮೇಲೆ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು; ಮತ್ತು ವಾರ್ಷಿಕವಾಗಿ ನಿಗಮದ ಸಿಬ್ಬಂದಿಗಳಿಗೆ ವೇತನ ಸಲುವಾಗಿ ಖರ್ಚಾಗುತ್ತಿರುವ ಹಣವೆಷ್ಟು;

(ಋ) 2019-2020, 2020-2021ನೇ ಸಾಲಿನ ಆಯವ್ಯಯದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗೆ ಬಿಡುಗಡೆ ಮಾಡಲಾದ ಹಣ ಎಷ್ಟು; ಯಾವ ಶೀರ್ಷಿಕೆಯಡಿ ಬಿಡುಗಡೆ ಮಾಡಲಾಗಿದೆ; ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಕಾಮಗಾರಿಗಳಿಗೆ ಅನುದಾನ ಖರ್ಚಾಗದೇ ಇದ್ದಲ್ಲಿ ಮುಂದಿನ ವರ್ಷಕ್ಕೆ ಕಾಯ್ದಿರಿಸುವ ಅವಕಾಶ ಕಲ್ಪಿಸಲಾಗಿದೆಯೇ?